# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೊಪ್ಪಳ ಜಿಲ್ಲೆ, ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ DBOT Tender Document ಸಿದ್ಧಪಡಿಸಲು ಸಮಿತಿ ರಚಿಸುವ ಕುರಿತು.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 185 ಗ್ರಾನೀಸ(5)2014 ದಿನಾಂಕ:24.02.2016.

**ಪೀಠಿಕೆ:**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಕೊಪ್ಪಳ ಜಿಲ್ಲೆ, ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ ಸಾಕಷ್ಟು ಪ್ರಮಾಣದಲ್ಲಿ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಅರ್ಹ ಮತ್ತು ಆಸಕ್ತಿ ಇರುವ ಗುತ್ತಿಗೆದಾರರನ್ನು DBOT ಆಧಾರದಡಿ ಚಾಲ್ತಿ KTPP ನಿಯಮಗಳನ್ವಯ ಗೊತ್ತುಪಡಿಸುವ ಮೂಲಕ ಯೋಜನೆ ಅನುಷ್ಠಾನಗೊಳಿಸಲು ಆದೇಶ ಹೊರಡಿಸಲಾಗಿದೆ. ಸದರಿ DBOT Tender Documentನ ರೂಪುರೇಷೆಗಳ ಮತ್ತು ಮಾನದಂಡಗಳನ್ನು ಸಿದ್ಧಪಡಿಸಲು ಶ್ರೀ ಮೌನೀಶ್ ಮೌದ್ಗಿಲ್, ಆಯುಕ್ತರು(ಗ್ರಾಮೀಣಾಭಿವೃದ್ಧಿ) MGNREGS ಇವರ ಅಧ್ಯಕ್ಷತೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ; ಶ್ರೀ ಅಶೋಕ್ ಬಡಕಲ್, ಪುನೆ; ಶ್ರೀ ಎ.ಟಿ.ಸ್ಯಾಮುವೆಲ್, ನಿರ್ದೇಶಕರು, STUP CONSULTANTS, ಬೆಂಗಳೂರು; ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ; ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ಹಾಗೂ ಶ್ರೀ ವಿ.ಜೆ.ರಾಯ್ಕರ್, ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಳಗಾವಿ ಇವರನ್ನೊಳಗೊಂಡಂತೆ ಸಮಿತಿ ರಚಿಸಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಸೂಚಿಸಿರುತ್ತಾರೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 819 ಗ್ರಾಕುನೀ&ನೈಇ 2016 ಬೆಂಗಳೂರು, ದಿನಾಂಕ:03.06.2016.**

ಪೀಠಿಕೆಯಲ್ಲಿನ ಪ್ರಸ್ತಾಪವನ್ನು ಪರಿಶೀಲಿಸಿ, ಕೊಪ್ಪಳ ಜಿಲ್ಲೆ, ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೂ ಸಾಕಷ್ಟು ಪ್ರಮಾಣದಲ್ಲಿ ಸುರಕ್ಷಿತ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಕಲ್ಪಿಸಲು ಶಾಶ್ವತ ಬೃಹತ್ ಕುಡಿಯುವ ನೀರಿನ ಯೋಜನೆಯನ್ನು DBOT ಆಧಾರದ ಮೇಲೆ ಟೆಂಡರ್ ಕರೆಯಲು ಯೋಜನೆಗೆ ಅಗತ್ಯವಿರುವ ಟೆಂಡರ್ ಡಾಕ್ಯುಮೆಂಟ್ / REP ಹಾಗೂ ಗುತ್ತಿಗೆ ನಿರ್ವಹಣಾ ನಿಬಂಧನೆಗಳನ್ನು Contract Management Terms ಸಿದ್ಧಪಡಿಸಲು ಕೆಳಕಂಡ ಅಧಿಕಾರಿಗಳ ಸಮಿತಿಯನ್ನು ರಚಿಸಲು ಸರ್ಕಾರವು ಹರ್ಷಿಸುತ್ತದೆ.

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಮೌನೀಶ್ ಮೌದ್ಗಿಲ್ ಆಯುಕ್ತರು(ಗ್ರಾಮೀಣಾಭಿವೃದ್ಧಿ) MGNREGS, ಬಹುಮಹಡಿ ಕಟ್ಟಡ, ಬೆಂಗಳೂರು | ಅಧ್ಯಕ್ಷರು |
| 2 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ | ಸದಸ್ಯರು |
| 3 | ಶ್ರೀ ಅಶೋಕ್ ಬಡಕಲ್,<br>ವಿಃ-1 ಸ್ಟೇಟ್ ಬ್ಯಾಂಕ್ ನಗರ ಸೋಸಾಯಿಟಿ ಬಿಬ್ವೆವಾಡಿ, ಪುನೆ-411037 | ಸದಸ್ಯರು |
| 4 | ಶ್ರೀ ಎ.ಟಿ.ಸ್ಯಾಮುವೆಲ್, ನಿರ್ದೇಶಕರು, STUP CONSULTANTS ಬೆಂಗಳೂರು, | ಸದಸ್ಯರು |
| 5 | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ | ಸದಸ್ಯರು |
| 6 | ಶ್ರೀ ವಿ.ಜೆ.ರಾಯ್ಕರ್ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಳಗಾವಿ | ಸದಸ್ಯರು |
| 7 | ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ ಬೆಂಗಳೂರು | ಸದಸ್ಯ ಕಾರ್ಯದರ್ಶಿ |

2. ಮೇಲ್ಕಂಡ ಸಮಿತಿಯು ಕೊಪ್ಪಳ ಜಿಲ್ಲೆಯ ಈ ಬೃಹತ್ ಕುಡಿಯುವ ನೀರಿನ ಯೋಜನೆಯ ಅನುಷ್ಠಾನ ಸಂಬಂಧ ಅಗತ್ಯವಿರುವ ಟೆಂಡರ್ ಡಾಕ್ಯುಮೆಂಟನ್ನು ಸಿದ್ಧಪಡಿಸಬೇಕು. ಸದರಿ DBOT-TORನ್ನು KTPP ಕಾಯ್ದೆ ಹಾಗೂ ಸಂಬಂಧಿಸಿದ ಸರ್ಕಾರದ ಆದೇಶಕ್ಕೆ ಪೂರಕವಾಗಿ ಸಿದ್ಧಪಡಿಸಬೇಕು. ಇದಲ್ಲದೆ, ಆರ್ಥಿಕ ಮತ್ತು ತಾಂತ್ರಿಕ ಮಾನದಂಡಗಳನ್ನು ಸಮರ್ಪಕವಾಗಿ ಈಗಾಗಲೇ ಆರ್ಥಿಕ ಇಲಾಖೆಯ PWD ಕೋಶ ಮತ್ತು ಗ್ರಾಅಪ ಇಲಾಖೆಯು ಹೊರಡಿಸಿರುವ DBOT ಟೆಂಡರ್ ಡಾಕ್ಯುಮೆಂಟ್‌ಗಳ ಹಿನ್ನೆಲೆಯಲ್ಲಿ ಗರಿಷ್ಠ ಮಿತಿವ್ಯಯ ಅನುಸರಿಸಲು ಅಗತ್ಯವಿರುವ ಮಾನದಂಡಗಳನ್ನು ಅಳವಡಿಸಬೇಕು.

3. ಯೋಜನೆ ಅನುಷ್ಠಾನ ವಿಧಾನ, ಬಿಲ್ ಪಾವತಿ, ಗುಣಮಟ್ಟ, ಪರಿಶೀಲನೆ ಹಾಗೂ ಯೋಜನೆ ಅನುಷ್ಠಾನಗೊಂಡ ನಂತರ ಅವುಗಳ ಸಮರ್ಪಕ ನಿರ್ವಹಣೆ, ಅದರ ಬದ್ಧತೆ, ಮೀಟರಿಂಗ್ ವ್ಯವಸ್ಥೆ, ನೀರಿನ ಕರ ವಸೂಲಿ, ವಿದ್ಯುತ್ ಪೂರೈಕೆ(EFL)ವ್ಯವಸ್ಥೆ, ನೀರಿನ ಗುಣಮಟ್ಟ ಪರೀಕ್ಷೆ ಬಾಬ್ತುಗಳ ಷರತ್ತುಗಳನ್ನು ಅಳವಡಿಸಬೇಕು.

4. ಈಗಾಗಲೇ ಜಿಲ್ಲೆಯಲ್ಲಿ ಸ್ಥಾಪಿತವಾಗಿರುವ ಮತ್ತು ಅನುಷ್ಠಾನದಲ್ಲಿರುವ ಬಹುಗ್ರಾಮ(MVS) ಯೋಜನೆಗಳ ಆಸ್ತಿದಾಯಿತ್ವಗಳನ್ನು ಗಣನೆಗೆ ತೆಗೆದುಕೊಳ್ಳಬೇಕು. ಅದನ್ನುಳಿದ ಬಾಕಿ ಜನವಸತಿ ಮತ್ತು ಕಾಮಗಾರಿಗಳಿಗೆ ಮಾತ್ರ DBOT ಅಂದಾಜು ಸೀಮಿತವಾಗಬೇಕು. ಒಂದು ವೇಳೆ ಜನವಸತಿಗಳಲ್ಲಿನ ಆಂತರಿಕ ಸಂಪರ್ಕದಲ್ಲಿನ ಕೊರತೆ / ಅಂತರವನ್ನು ನೀಗಿಸುವ ಅಗತ್ಯತೆಯಿದ್ದಲ್ಲಿ ಅದನ್ನೂ ಸಹ DBOT ವ್ಯಾಪ್ತಿಯೊಳಗೆ ತರಬೇಕು.

5. ಯೋಜನೆಗಳ ಅನುಷ್ಠಾನ ಸಂಬಂಧ ಅಗತ್ಯವಿರುವ ವಿನ್ಯಾಸಗಳ ಸಲುವಾಗಿ DPR ತಯಾರಿಕೆ, OHT, Pumping Station ಅಳವಡಿಸುವುದು, ಪೈಪುಗಳ ಮಾದರಿ, WTP, MBR, Distributor Network SCADA ಭೂಸ್ವಾಧೀನ, ಅರಣ್ಯ, ರಾಷ್ಟ್ರೀಯ ಹೆದ್ದಾರಿ, ಕಂದಾಯ ಇಲಾಖೆ ಸಹಮತಿ, ಇತ್ಯಾದಿ ವಿಷಯಗಳ ಬಗ್ಗೆ TOR ನಿಬಂಧನೆಗಳಲ್ಲಿ ಸೂಕ್ತವಾಗಿ ಸದರಿ ಅಂಶಗಳನ್ನು ಅಳವಡಿಸಬೇಕು ಹಾಗೂ ಅವಶ್ಯವಿರುವ ಇತರೆ ಎಲ್ಲಾ ಅಂಶಗಳನ್ನು ಪರಿಶೀಲಿಸುವುದು.

6. ಮೇಲ್ಕಂಡ ಸಮಿತಿಗೆ ಅಗತ್ಯವಿರುವ ಎಲ್ಲಾ ಮಾಹಿತಿ ಮತ್ತು ಸಹಕಾರವನ್ನು ಸಂಬಂಧಪಟ್ಟ ಅಧಿಕಾರಿಗಳು ನೀಡಬೇಕೆಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವೈ.ಬಿ. ಹೊನ್ನಲಿಂಗಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)(ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ / ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ / ವಿಕಾಸಸೌಧ ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
11. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂ-09.
12. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
13. ಶ್ರೀ ಮೌನೀಶ್ ಮೌದ್ಗಿಲ್ ಆಯುಕ್ತರು(ಗ್ರಾಮೀಣಾಭಿವೃದ್ಧಿ) MGNREGS, ಬಹುಮಹಡಿ ಕಟ್ಟಡ, ಬೆಂಗಳೂರು.
14. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ.
15. ಶ್ರೀ ಅಶೋಕ್ ಬಡಕಲ್, ವಿಃ-1 ಸ್ಟೇಟ್ ಬ್ಯಾಂಕ್ ನಗರ ಸೋಸಾಯಿಟಿ ಬಿಬ್ವೆವಾಡಿ, ಪುನೆ-411037
16. ಶ್ರೀ ಎ.ಟಿ.ಸ್ಯಾಮುವೆಲ್, ನಿರ್ದೇಶಕರು, STUP CONSULTANTS ಬೆಂಗಳೂರು.
17. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
18. ಶ್ರೀ ವಿ.ಜೆ.ರಾಯ್ಕರ್ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಳಗಾವಿ.
19. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂ-9.
20. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಕೊಪ್ಪಳ.
21. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರ್ಗಿ.
22. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕೊಪ್ಪಳ.
23. ಕಾರ್ಯನಿರ್ವಹಣಾ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಕೊಪ್ಪಳ ಮತ್ತು ಯಲಬುರ್ಗಾ.
24. ಮುಖ್ಯ ಲೆಕ್ಕಾಧಿಕಾರಿ, RDWSD ಬೆಂಗಳೂರು.
25. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
26. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
27. ಆಯುಕ್ತರು, RDWSD ಇವರ ಆಪ್ತ ಸಹಾಯಕರು.
28. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
29. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
30. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
31. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
32. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.